# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 506 (489) |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 20-02-2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜನಪರ ಕಲ್ಯಾಣ ಕಾರ್ಯಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಆರೋಗ್ಯ ನಿರೀಕ್ಷಣಾಧಿಕಾರಿಗಳ ಖಾಲಿ ಇರುವ ಹುದ್ದೆಗಳೆಷ್ಟು, ಹಾಗೂ ಮಂಜೂರಾಗಿರುವ ಹುದ್ದೆಗಳೆಷ್ಟು; (ವಿವರ ನೀಡುವುದು)</td><td>ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಯ ಮಂಜೂರು, ಕಾರ್ಯನಿರತ ಹಾಗೂ ಖಾಲಿ ಹುದ್ದೆಗಳ ಮಾಹಿತಿಯು ಈ ಕೆಳಕಂಡಂತಿದ್ದು, ವಿವರವನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ.
<table>
<tr><th>ಪದನಾಮ</th><th>ಮಂಜೂರು</th><th>ಕಾರ್ಯನಿರತ</th><th>ಖಾಲಿ</th></tr>
<tr><td>ಆರೋಗ್ಯ ನಿರೀಕ್ಷಣಾಧಿಕಾರಿಗಳು</td><td>5944</td><td>3095</td><td>2849</td></tr>
</table></td></tr>
<tr><td>(ಆ)</td><td>ಖಾಲಿ ಇರುವ ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆ ಭರ್ತಿ ಮಾಡಲು ಆರೋಗ್ಯ ಇಲಾಖೆಯು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುವುದು ನಿಜವೇ, ಇದ್ದಲ್ಲಿ ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ; (ವಿವರ ನೀಡುವುದು)</td><td>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದ್ದು, ಪರಿಶೀಲನಾ ಹಂತದಲ್ಲಿದೆ.</td></tr>
<tr><td>(ಇ)</td><td>ಆರೋಗ್ಯ ನಿರೀಕ್ಷಣಾಧಿಕಾರಿಗಳ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು? (ವಿವರ ನೀಡುವುದು)</td><td>ಖಾಲಿ ಇರುವ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯಿಂದ ಸಹಮತಿ ದೊರೆತ ನಂತರ ನಿಯಮಾನುಸಾರ ಕ್ರಮವಹಿಸಲಾಗುತ್ತದೆ.</td></tr>
</table>

**ಸಂಖ್ಯೆ: ಆಕುಕ 62 ಹೆಚ್‌ಎಸ್‌ಎಂ 2023**

(ಡಾ: ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು